# ಹಿಂಬರಹ

**ಸಂಖ್ಯೆ: ಡಿಟಿಇ 01 ಇಎಸ್‌ಟಿ(9) 2014** 11079 **ದಿನಾಂಕ: 26-06-2014**

ದಿನಾಂಕ:13.6.2014 ರ ಸರ್ಕಾರಿ ಅಧಿಸೂಚನೆ ಸಂಖ್ಯೆ:ಸಿ.ಆ.ಸು.ಇ 25 ಎಸ್.ಎಂ.ಆರ್. 2012 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ಈ ನಿರ್ದೇಶನಾಲಯದ ಇ.ಎಸ್.ಟಿ.(8)ಎ ಮಾಹಿತಿಗಾಗಿ.
4. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ

M Devaiah

**ಆಡಳಿತಾಧಿಕಾರಿ**

KK 26/6/14

Sh-est(9) Endsmnt

## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಪಿಎಆರ್ 25 ಎಸ್‌ಎಂಆರ್ 2012

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 13.06.2014

### ಅಧಿಸೂಚನೆ

ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮ 1978 (1990ರ ಕರ್ನಾಟಕ ಅಧಿನಿಯಮ 14) ರ 8ನೇ ಪ್ರಕರಣದೊಂದಿಗೆ ಓದಲಾದ, 3ನೇ ಪ್ರಕರಣದ (1) ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು 1963ರ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳನ್ನು ಮತ್ತಷ್ಟು ತಿದ್ದುಪಡಿ ಮಾಡುವ ಈ ಮುಂದಿನ ನಿಯಮಗಳ ಕರಡನ್ನು, ಸದರಿ ಅಧಿನಿಯಮದ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ, ಅದರಿಂದ ತೊಂದರೆಗೊಳಗಾಗಬಹುದಾದ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಮತ್ತು ಸದರಿ ಕರಡನ್ನು ಅದು ಅಧಿಕೃತ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಹದಿನೈದು ದಿನಗಳ ತರುವಾಯ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

ಸದರಿ ಕರಡಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ಮೇಲೆ ನಿಗಧಿಪಡಿಸಿದ ಅವಧಿಯು ಮುಕ್ತಾಯವಾಗುವುದಕ್ಕೆ ಮೊದಲು ಯಾರೇ ವ್ಯಕ್ತಿಯಿಂದ ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಅಥವಾ ಸಲಹೆಯನ್ನು ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಕರ್ನಾಟಕ ಸರ್ಕಾರ ಸಚಿವಾಲಯ, ವಿಧಾನ ಸೌಧ, ಬೆಂಗಳೂರು-560 001 ಇವರಿಗೆ ಸಲ್ಲಿಸಬಹುದು.

### ಕರಡು ನಿಯಮಗಳು

1. **ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 2014 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ನಿಯಮ 3 ರ ತಿದ್ದುಪಡಿ:-** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963 (ಇನ್ನು ಮುಂದೆ ಸದರಿ ನಿಯಮಗಳೆಂದು ಉಲ್ಲೇಖಿಸಿದೆ) ರ ನಿಯಮ 3, ಖಂಡ (ಹೆಚ್)ರ ಉಪ ಖಂಡ (v) ರಲ್ಲಿನ ಕೋಷ್ಟಕ ಹಾಗೂ ಇದರಲ್ಲಿನ ನಮೂದುಗಳ ಬದಲಾಗಿ ಕೆಳಕಂಡವುಗಳನ್ನು ಪ್ರತಿಸ್ಥಾಪಿಸತಕ್ಕದ್ದು:-

EST (9) / EST (8) A / JD (Adm) / Gopal / Est
PS 388 25/6/2014

. . . . 2

**ಕೋಷ್ಟಕ**

| | 2012ರ ವೇತನ ಶ್ರೇಣಿಗಳ ಪ್ರಕಾರ ಮೂಲವೇತನ | ಆಸ್ಪತ್ರೆಗಳಲ್ಲಿ ಅಥವಾ ಸ್ಯಾನಿಟೋರಿಯಗಳಲ್ಲಿನ ವಸತಿಯ ದರ್ಜೆ (ದಿನದ ಆಧಾರದ ಮೇಲೆ ಅನ್ವಯವಾಗುವ ದರಗಳು) |
|---|---|---|
| | 1 | 2 |
| | 1. ಎಲ್ಲಾ ಸರ್ಕಾರಿ/ವಿಶೇಷ ಆಸ್ಪತ್ರೆಗಳು ಸ್ಯಾನಿಟೋರಿಯಗಳನ್ನು ಒಳಗೊಂಡಂತೆ | |
| 1 | ರೂ. 13,000 ಗಳನ್ನು ಮೀರದಂತೆ | ವಾಣಿವಿಲಾಸ ಆಸ್ಪತ್ರೆ, ಬೆಂಗಳೂರು, ಮಿಂಟೋ ಆಸ್ಪತ್ರೆ, ಬೆಂಗಳೂರು, ಚೆಲುವಾಂಬ ಆಸ್ಪತ್ರೆ, ಮೈಸೂರು, ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆ, ಬಳ್ಳಾರಿ ಈ ಆಸ್ಪತ್ರೆಗಳಲ್ಲಿ ಸಾಮಾನ್ಯ ದರ್ಜೆಯ ವಾರ್ಡ್‌ಗಳು ಅಥವಾ ರೂ. 30ರ ವಾರ್ಡ್‌ಗಳು ಅಥವಾ ರೂ. 50ರ ವಾರ್ಡ್‌ಗಳು. |
| 2 | ರೂ. 13,000 ಕ್ಕೆ ಹೆಚ್ಚಿನ ಆದರೆ ರೂ. 19,000 ಗಳನ್ನು ಮೀರದಂತೆ | ರೂ. 30ರ ಅಥವಾ ಮೇಲ್ಪಟ್ಟ ಯಾವುದೇ ವಾರ್ಡ್‌ಗಳು ಮತ್ತು ರೂ. 50ರ ಒಳಪಟ್ಟ ವಾರ್ಡ್‌ಗಳು. |
| 3 | ರೂ. 19,000 ಕ್ಕೆ ಹೆಚ್ಚಿನ ಆದರೆ ರೂ. 28,800 ಗಳನ್ನು ಮೀರದಂತೆ | ರೂ. 50ರ ಅಥವಾ ಮೇಲ್ಪಟ್ಟ ಯಾವುದೇ ವಾರ್ಡ್‌ಗಳು ಮತ್ತು ರೂ. 75ರ ಒಳಪಟ್ಟ ವಾರ್ಡ್‌ಗಳು. |
| 4 | ರೂ. 28,800 ಕ್ಕೆ ಹೆಚ್ಚಿನ ಆದರೆ ರೂ. 33,600 ಗಳನ್ನು ಮೀರದಂತೆ | ರೂ. 100ರ ಅಥವಾ ಮೇಲ್ಪಟ್ಟ ಯಾವುದೇ ವಾರ್ಡ್‌ಗಳು ಮತ್ತು ರೂ. 150ರ ಒಳಪಟ್ಟ ವಾರ್ಡ್‌ಗಳು. |
| 5 | ರೂ. 33,600 ಕ್ಕೆ ಮೇಲ್ಪಟ್ಟು | ರೂ. 150ರ ವಾರ್ಡ್‌ಗಳು ಅಥವಾ ರೂ. 150ರ ಮೇಲ್ಪಟ್ಟ ಯಾವುದಾದರೂ ವಾರ್ಡ್‌ಗಳು. |

**3. ನಿಯಮ 8 ರ ತಿದ್ದುಪಡಿ:-** ಈ ನಿಯಮಾವಳಿಯ ನಿಯಮ 3 ರ ಉಪ ನಿಯಮ (3) ರ ಪರಂತುಕದಲ್ಲಿನ ಕೋಷ್ಟಕಕ್ಕೆ ಕೆಳಕಂಡವುಗಳನ್ನು ಪ್ರತಿಸ್ಥಾಪಿಸತಕ್ಕದ್ದು:-

**ಕೋಷ್ಟಕ**

| | ವೇತನದ ಹಂತ | ವಾರ್ಡ್‌ಗಳ ವರ್ಗ/ಯಾವ ವರ್ಗದ ವಾರ್ಡ್‌ಗೆ ಅರ್ಹತೆ ಇರುವುದು | ಅರ್ಹತೆ ಇರುವ ವಾರ್ಡ್‌ನ ಗರಿಷ್ಠ ದರ/ರೂಂ ಬಾಡಿಗೆ |
|---|---|---|---|
| | 1 | 2 | 3 |
| i) | ಮಾಹೆಯಾನ ರೂ. 16,000/- ರವರೆಗೆ | ಸಾಮಾನ್ಯ ವಾರ್ಡ್ | ದಿನ ಒಂದಕ್ಕೆ ರೂ. 500/- |
| ii) | ಮಾಹೆಯಾನ ರೂ. 16,000/- ರಿಂದ ರೂ. 43,200/- ರವರೆಗೆ | ಅರೆ ಖಾಸಗಿ ವಾರ್ಡ್ | ದಿನ ಒಂದಕ್ಕೆ ರೂ. 1500/- |
| iii) | ಮಾಹೆಯಾನ ರೂ. 43,200/- ಮತ್ತು ಹೆಚ್ಚಿನ | ಖಾಸಗಿ ವಾರ್ಡ್ | ದಿನ ಒಂದಕ್ಕೆ ರೂ. 2000/- |

. . . . 3

**4. ನಿಯಮ 14 ರ ತಿದ್ದುಪಡಿ:-** ಈ ನಿಯಮಾವಳಿಯ ನಿಯಮ 14 ರ ಉಪ ನಿಯಮ (2) ರಲ್ಲಿ,-

**(ಅ)** ಖಂಡ (ಐ) ನಲ್ಲಿ, **"ಗರಿಷ್ಠ ಮೊತ್ತ ಒಂದು ನೂರು ರೂಪಾಯಿಗಳು"** ಎಂಬ ಪದಗಳು ಮತ್ತು ಅಂಕಿಗಳ ಬದಲಾಗಿ **"ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಕೇಂದ್ರ ಸರ್ಕಾರದ ಆರೋಗ್ಯ ಸೇವೆಗಳ (CGHS) ಅಡಿಯಲ್ಲಿ ಕಾಲಕಾಲಕ್ಕೆ ನಿಗದಿಪಡಿಸುವ ದರದಂತೆ"** ಎಂಬ ಪದಗಳು ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**(ಆ)** ಖಂಡ (ಜೆ) ನಲ್ಲಿ, **"ಕರ್ನಾಟಕ ಸಿವಿಲ್ ಸೇವೆಗಳು (ಪರಿಷ್ಕೃತ ವೇತನ) ನಿಯಮಗಳು, 2007ರ ಅನುಸಾರವಾಗಿ ರೂ. 15,600/-"** ಎಂಬ ಪದಗಳು ಮತ್ತು ಅಂಕಿಗಳ ಬದಲಾಗಿ **"ಕರ್ನಾಟಕ ಸಿವಿಲ್ ಸೇವೆಗಳು (ಪರಿಷ್ಕೃತ ವೇತನ) ನಿಯಮಗಳು, 2012ರ ಅನುಸಾರವಾಗಿ ರೂ. 31,200/-"** ಎಂಬ ಪದಗಳು ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**(ಇ)** ಖಂಡ (ಎಲ್) ನಲ್ಲಿ, **"ಕ್ಲೇಮು ಮಾಡುವ ಗರಿಷ್ಠ ಮೊತ್ತವು ಪ್ರತೀ ಪ್ರಕರಣದಲ್ಲೂ ಮೂರು ನೂರು ರೂಪಾಯಿಗಳನ್ನು ಮೀರಬಾರದು ಎಂಬ ಷರತ್ತಿಗೊಳಪಟ್ಟು ಸರ್ಕಾರಿ ನೌಕರನ ಇಡೀ ಸೇವಾವಧಿಯಲ್ಲಿ ಮೂರು ಬಾರಿ ಅನುಮತಿಸತಕ್ಕದ್ದು"** ಎಂಬ ಪದಗಳು ಮತ್ತು ಅಂಕಿಗಳ ಬದಲಾಗಿ **"ಕ್ಲೇಮು ಮಾಡುವ ಗರಿಷ್ಠ ಮೊತ್ತವು ಪ್ರತೀ ಪ್ರಕರಣದಲ್ಲೂ ಆರು ನೂರು ರೂಪಾಯಿಗಳನ್ನು ಮೀರಬಾರದು ಎಂಬ ಷರತ್ತಿಗೊಳಪಟ್ಟು ಸರ್ಕಾರಿ ನೌಕರನ ಇಡೀ ಸೇವಾವಧಿಯಲ್ಲಿ ಐದು ಬಾರಿ ಅನುಮತಿಸತಕ್ಕದ್ದು"** ಎಂಬ ಪದಗಳು ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**(ಈ)** ಖಂಡ (ಎಂ) ನಲ್ಲಿ, **"ಕರ್ನಾಟಕ ಸಿವಿಲ್ ಸೇವೆಗಳು (ಪರಿಷ್ಕೃತ ವೇತನ) ನಿಯಮಗಳು, 2007ರ ಅನುಸಾರವಾಗಿ ರೂ. 15,600/-"** ಎಂಬ ಪದಗಳು ಮತ್ತು ಅಂಕಿಗಳ ಬದಲಾಗಿ **"ಕರ್ನಾಟಕ ಸಿವಿಲ್ ಸೇವೆಗಳು (ಪರಿಷ್ಕೃತ ವೇತನ) ನಿಯಮಗಳು, 2012ರ ಅನುಸಾರವಾಗಿ ರೂ. 31,200/-"** ಎಂಬ ಪದಗಳು ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**5. ನಿಯಮ 23 ರ ತಿದ್ದುಪಡಿ:-** ಈ ನಿಯಮಾವಳಿಯ ನಿಯಮ 23 ರ ಉಪ ನಿಯಮ (2) ರಲ್ಲಿ, **"ಕರ್ನಾಟಕ ಸಿವಿಲ್ ಸೇವೆಗಳು (ಪರಿಷ್ಕೃತ ವೇತನ) ನಿಯಮಗಳು, 2007ರ ಅನುಸಾರವಾಗಿ ರೂ. 15,600/-"** ಎಂಬ ಪದಗಳು ಮತ್ತು ಅಂಕಿಗಳ ಬದಲಾಗಿ **"ಕರ್ನಾಟಕ ಸಿವಿಲ್ ಸೇವೆಗಳು (ಪರಿಷ್ಕೃತ ವೇತನ) ನಿಯಮಗಳು, 2012ರ ಅನುಸಾರವಾಗಿ ರೂ. 31,200/-"** ಎಂಬ ಪದಗಳು ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಡಿ. ನಾಗೇಶ್ ಪಾಟೀಕ್)**
ಸರ್ಕಾರದ ಉಪ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾನಿಯಮಗಳು-2)

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು- ಇವರಿಗೆ ವಿಶೇಷ ರಾಜ್ಯ ಪತ್ರದ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 500 ಪ್ರತಿಗಳನ್ನು ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಸೇವಾನಿಯಮಗಳು-2), ಕೊಠಡಿ ಸಂಖ್ಯೆ: 30, ವಿಧಾನ ಸೌಧ, ಬೆಂಗಳೂರು-560 001 ಇವರಿಗೆ ಒದಗಿಸಲು.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
4. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
7. ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಮಂಡಲ, ವಿಧಾನ ಸೌಧ, ಬೆಂಗಳೂರು
8. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ವಿಧಾನ ಸೌಧ, ಬೆಂಗಳೂರು
9. ಎಲ್ಲಾ ಇಲಾಖಾ ಮುಖ್ಯಸ್ಥರು.
10. ಎಲ್ಲಾ ಪ್ರಾದೇಶಿಕ ಆಯುಕ್ತರು.
11. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
12. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
13. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
14. ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009.
15. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
16. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
17. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
18. ರಾಜ್ಯದ ಜಿಲ್ಲಾ ಆಸ್ಪತ್ರೆಗಳ ಎಲ್ಲಾ ಜಿಲ್ಲಾ ವೈದ್ಯಾಧಿಕಾರಿಗಳು.
19. ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
21. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.